ಆ) ಪ್ರತಿ ಗ್ರಾಮಗಳಲ್ಲಿಯೂ ಪಡಿತರ ವಿತರಣಾ ಕೇಂದ್ರ ತೆರೆಯಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

ಇ) ಇಲ್ಲದಿದ್ದಲ್ಲಿ ಅಂತಹ ಗ್ರಾಮಗಳಿಗೆ ಪಡಿತರ ಪೂರೈಸಲು ಏನು ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ದಿನೇಶ್ ಗುಂಡೂರಾವ್ (ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಗ್ರಾಮದಲ್ಲಿರುವ ಪಡಿತರ ಚೀಟಿದಾರರ ಸಂಖ್ಯೆಗೆ ಅನುಗುಣವಾಗಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲಾಗುತ್ತದೆ. ಕರ್ನಾಟಕ ಆವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶ 1992ರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಠ 300 ಪಡಿತರ ಚೀಟಿಗಳಿಗೆ ಮತ್ತು ನಗರ ಪ್ರದೇಶದಲ್ಲಿ ಕನಿಷ್ಠ 500 ಪಡಿತರ ಚೀಟಿಗಳಿಗೆ ನ್ಯಾಯಬೆಲೆ ಅಂಗಡಿ ತೆರೆಯಲು ಅವಕಾಶವನ್ನು ಕಲ್ಪಿಸಲಾಗಿದೆ. ಕೆಲವು ಗ್ರಾಮಗಳಲ್ಲಿ ಅತ್ಯಂತ ಕಡಿಮೆ ಪಡಿತರ ಚೀಟಿಗಳು ಇದ್ದಲ್ಲಿ ಅಂತಹ ಗ್ರಾಮದ ಪಡಿತರ ಚೀಟಿಗಳನ್ನು ಅತ್ಯಂತ ಸಮೀಪದ ಗ್ರಾಮದ ನ್ಯಾಯಬೆಲೆ ಅಂಗಡಿಗೆ ಜೋಡಣೆ ಮಾಡಲಾಗುತ್ತದೆ. ರಾಜ್ಯದಲ್ಲಿ ಒಟ್ಟು 20,826 ನ್ಯಾಯಬೆಲೆ ಅಂಗಡಿಗಳು ಚಾಲನೆಯಲ್ಲಿವೆ.

ಕೆಲವು ಗ್ರಾಮಗಳಲ್ಲಿ ನ್ಯಾಯಬೆಲೆ ಅಂಗಡಿಗೆ ಇರುವ ದೂರವನ್ನು ಗಮನಿಸಿ ಜಿಲ್ಲಾಧಿಕಾರಿಗಳು ಕನಿಷ್ಠ 300 ಪಡಿತರ ಚೀಟಿಗಿಂತಲೂ ಕಡಿಮೆ ಇರುವ ಗ್ರಾಮಗಳಲ್ಲಿ ನ್ಯಾಯಬೆಲೆ ಅಂಗಡಿ ತೆರೆಯಲು ಅವಕಾಶವಿದ್ದು, ಅವಶ್ಯಕತೆ ಇದ್ದಲ್ಲಿ ಜಿಲ್ಲಾಧಿಕಾರಿಗಳು ನ್ಯಾಯಬೆಲೆ ಅಂಗಡಿ ತೆರೆಯಲು ಕ್ರಮವಹಿಸುತ್ತಿದ್ದಾರೆ.

ಆ) ಹೌದು, ಅವಶ್ಯಕತೆಗೆ ಅನುಗುಣವಾಗಿ ಪಡಿತರ ವಿತರಣಾ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ವಸತಿ ಶಾಲೆಗಳ ಪ್ರಾರಂಭದ ಬಗ್ಗೆ

418(669); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಸರ್ಕಾರ ಪ್ರತಿಯೊಂದು ಹೋಬಳಿಗೆ ಒಂದು ವಸತಿ ಶಾಲೆಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆಗೆ ಎಷ್ಟು ಹೋಬಳಿಗಳಲ್ಲಿ ಶಾಲೆ ತೆರೆಯಲಾಗಿದೆ; (ವಿವರ ನೀಡುವುದು);

ಇ) ಹಿರೇಕೆರೂರು ತಾಲ್ಲೂಕಿನಲ್ಲಿ ಯಾವ ಹೋಬಳಿಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಈ) ಚಿನ್ನಮುಳಗುಂಡ ಗ್ರಾಮದಲ್ಲಿ ಸ್ಥಳವಿದ್ದು, ವಸತಿ ಶಾಲೆ ತೆರೆಯುವ ಆಲೋಚನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹೌದು

ಆ) 2014–15 ನೇ ಸಾಲಿನ ಆಯವ್ಯಯ ಭಾಷಣದಲ್ಲಿ 100 ಹೊಸ ವಸತಿ ಶಾಲೆಗಳನ್ನು ಪ್ರಾರಂಭಿಸಲು ಘೋಷಿಸಲಾಗಿದೆ. ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಇ) ಹಿರೇಕೆರೂರು ತಾಲ್ಲೂಕಿನ ಹಂಸಭಾವಿ ಹೋಬಳಿಗೆ ಹೊಸ ವಸತಿ ಶಾಲೆಯನ್ನು ಮಂಜೂರು ಮಾಡಲು ಪ್ರಸ್ತಾವನೆ ಸ್ವೀಕೃತವಾಗಿದೆ.

ಈ) ಹೌದು

ಉ) ವಿದ್ಯಾರ್ಥಿಗಳ ಲಭ್ಯತೆ, ಬಾಡಿಗೆ ಕಟ್ಟಡ ಹಾಗೂ ವಸತಿ ಶಾಲೆಗಳಿಗೆ ಬೇಕಾದ ಸೂಕ್ತ ಜಮೀನು ಲಭ್ಯವಾದ ನಂತರ ಶಾಲೆಯನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು

ಅಂಬೇಡ್ಕರ್ ಹಾಗೂ ವಾಲ್ಮೀಕಿ ಭವನಗಳ ನಿರ್ಮಾಣ

419(670); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) 2013–14, 2014–15ನೇ ಸಾಲಿನಲ್ಲಿ ಎಷ್ಟು ಅಂಬೇಡ್ಕರ್ ಹಾಗೂ ವಾಲ್ಮೀಕಿ ಭವನಗಳನ್ನು ಕಟ್ಟಲು ಮಂಜೂರಾತಿ ನೀಡಲಾಗಿದೆ ಹಾಗೂ ಇಲ್ಲಿಯವರೆವಿಗೂ ಎಷ್ಟು ಭವನಗಳನ್ನು ಕಟ್ಟಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು);

ಆ) ಹಿರೇಕೆರೂರು ತಾಲ್ಲೂಕಿನ ಬಹಳಷ್ಟು ಗ್ರಾಮಗಳಲ್ಲಿ ಆ ಭವನಗಳ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುವುದೇ?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) 2013–14, 2014–15ನೇ ಸಾಲಿನಲ್ಲಿ ಒಟ್ಟು 552 ಅಂಬೇಡ್ಕರ್ ಭವನಗಳು ಹಾಗೂ 224 ವಾಲ್ಮೀಕಿ/ಸಮುದಾಯ ಭವನಗಳ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ ಹಾಗೂ ಮಂಜೂರಾದ ಭವನಗಳಿಗೆ ಸೂಕ್ತ ನಿವೇಶನವನ್ನು ಗುರುತಿಸಿ, ಕಾಮಗಾರಿಗಳನ್ನು ನಿಯಮಾನುಸಾರ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ. ಮಂಜೂರಾದ ಭವನಗಳ ತಾಲ್ಲೂಕುವಾರು ವಿವರಗಳನ್ನು ಅನುಬಂಧ–1 & 2ರಲ್ಲಿ ಒದಗಿಸಲಾಗಿದೆ.

ಆ) ಪ್ರಸ್ತುತ, ಸಾಲಿನಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಹಾಗೂ ವಾಲ್ಮೀಕಿ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ನಿಗಧಿಪಡಿಸಲಾದ ಅನುದಾನದ ಲಭ್ಯತೆಗನುಗುಣವಾಗಿ ಪರಿಶೀಲಿಸಿ ಮುಂದಿನ ಕ್ರಮ ವಹಿಸಲಾಗುವುದು.